1 ನರ್ಸಿಂಗ್ ತರಬೇತಿ

2 ಗಗನಸಖಿ ತರಬೇತಿ

3 ವಿದೇಶಿ ವ್ಯಾಸಂಗ

4 ಪೈಲೆಟ್ ತರಬೇತಿ

ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ

2006–07ನೇ ಸಾಲಿನಿಂದ (1) ಅತೀ ಹಿಂದುಳಿದ ವರ್ಗಗಳ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದವರಿಗೆ ವಿಶೇಷ ಯೋಜನೆ, (2) ಅಸಂಘಟಿತ ವಲಯದಲ್ಲಿ ಬರುವ ಭೂ ರಹಿತ ಕೃಷಿ ಕೂಲಿ/ಕಾರ್ಮಿಕರಿಗೆ ವಿಶೇಷ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ ಈ ಯೋಜನೆಗಳಲ್ಲಿ ವಿವಿಧ ಆದಾಯ ತರುವಂತಹ ಯೋಜನೆಗಳನ್ನು ಕೈಗೊಳ್ಳಲು ರೂ 5000/– ಸಬ್ಸಿಡಿ ಹಾಗೂ ಶೇ 4ರ ಬಡ್ಡಿ ದರದಲ್ಲಿ ರೂ 10,000/–ಗಳ ಸಾಲವನ್ನು ಕೊಡಲಾಗುತ್ತದೆ

599 (531) ಶ್ರೀ ಕೃಷ್ಣ ಬೈರೇಗೌಡ ಸಿ ಬಿ (ವೇಮಗಲ್) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೆದ್ದಾರಿಗಳ ಬದಿಗಳಲ್ಲಿ ಸುಸಜ್ಜಿತವಾದ ಆಸ್ಪತ್ರೆಗಳನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ?

ಆ) ಕೋಲಾರ ಜಿಲ್ಲೆಯಲ್ಲಿ ಯಾವ ಯಾವ ಸ್ಥಳಗಳಲ್ಲಿ ಸ್ಥಾಪಿಸುವ ಉದ್ದೇಶ ವಿದೆ?

ಇ) ರಾಷ್ಟ್ರೀಯ ಹೆದ್ದಾರಿ–4 ಕೋಲಾರ ತಾಲ್ಲೂಕು ನರಸಾಪುರದ ಮೂಲಕ ಹಾದುಹೋಗುತ್ತಿದ್ದು ಈ ಭಾಗದಲ್ಲಿ ಒಂದು ಆಸ್ಪತ್ರೆಯನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕಿದೆಯೇ?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಹೆದ್ದಾರಿಗೆ ಹತ್ತಿರದಲ್ಲಿರುವ 275 ಸಮುದಾಯ ಆರೋಗ್ಯ ಕೇಂದ್ರಗಳನ್ನು ಹಾಗೂ ಇತರೆ 44 ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ಆಸ್ಪತ್ರೆಗಳನ್ನು ಗುರುತಿಸಿದ್ದು ಇಲ್ಲಿ ತುರ್ತು ಅಪಘಾತ ಚಿಕಿತ್ಸಾ ಕೇಂದ್ರಗಳನ್ನು ತೆರೆಯಲು 12ನೇ ಹಣಕಾಸು ಯೋಜನೆ ಅಡಿಯಲ್ಲಿ ಯೋಜಿಸಲಾಗಿದೆ

ಆ) ಬಂಗಾರುಪೇಟೆ, ಬೇತಮಂಗಲ, ಚಿಕ್ಕಬಳ್ಳಾಪುರ, ಚಿಂತಾಮಣಿ ಬಟ್ಲಪಲ್ಲಿ, ಗೌರಿಬಿದನೂರು, ಶ್ರೀನಿವಾಸಪುರ, ಗೌನಪಲ್ಲಿ, ಗೂಳೂರು, ಬಾಗೇಪಲ್ಲಿ, ಮಾಲೂರು ಮುಳಬಾಗಿಲು, ಶಿಡ್ಲಘಟ್ಟ, ಗುಡಿಬಂಡೆ, ಹೀಗೆ ಒಟ್ಟು 14 ಸ್ಥಳಗಳನ್ನು ಗುರುತಿಸಲಾಗಿದೆ

ಇ) ಸದ್ಯಕ್ಕೆ ಈ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ

600 (377) ಶ್ರೀ ಕ್ಯಾತಸಂದ್ರ ಎನ್ ರಾಜಣ್ಣ (ಬೆಳ್ಳಾವಿ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಮಂಜೂರಾತಿಯಾಗಿರುವ ವೈದ್ಯರ ಹುದ್ದೆಗಳೆಷ್ಟು? ಖಾಲಿ ಇರುವ ವೈದ್ಯರ ಹುದ್ದೆಗಳೆಷ್ಟು?

ಆ) ವೈದ್ಯರ ಕೊರತೆಯಿಂದಾಗಿ ಸಾರ್ವಜನಿಕರಿಗೆ ಉಂಟಾಗಿರುವ ತೊಂದರೆ ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ತುಮಕೂರು ಜಿಲ್ಲೆ ಬೆಳ್ಳಾವಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಖಾಲಿ ಇರುವ ವೈದ್ಯರನ್ನು ತುಂಬದಿರುವ ಬಗ್ಗೆ ಕಾರಣಗಳೇನು? ಹುದ್ದೆ ತುಂಬಲು ಕಾಲ ಮಿತಿ ಹಾಕಿಕೊಳ್ಳಲಾಗಿದೆಯೇ?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ರಾಜ್ಯದ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಮಂಜೂರಾತಿಯಾಗಿರುವ ವೈದ್ಯರ ಹುದ್ದೆಗಳ ಸಂಖ್ಯೆ 5228 ಖಾಲಿ ಇರುವ ವೈದ್ಯರ ಸಂಖ್ಯೆ 781

ಆ) ಬಂದಿದೆ

ಇ) ತುಮಕೂರು ಜಿಲ್ಲೆ ಬೆಳ್ಳಾವಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 10 ವೈದ್ಯರ ಹುದ್ದೆ ಮಂಜೂರಾಗಿದ್ದು 10 ವೈದ್ಯರು ಸಹ ಕರ್ತವ್ಯ ನಿರ್ವಹಿಸುತ್ತಿದ್ದಾರೆ ವೈದ್ಯರ ಹುದ್ದೆ ಖಾಲಿ ಇರುವುದಿಲ್ಲ

601 (465) ಡಾ. ಮಹದೇವಪ್ಪ ಹೆಚ್ ಸಿ (ಟಿ. ನರಸೀಪುರ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಸೇರಿದ 1ನೇ ತರಗತಿಯಿಂದ ಸ್ನಾತಕೋತ್ತರ ವ್ಯಾಸಂಗದ ವರೆಗಿರುವ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು? ಈ ವಸತಿ ನಿಲಯಗಳ ವಿದ್ಯಾರ್ಥಿಗಳಿಗೆ ಒದಗಿಸಲಾಗಿರುವ ಸವಲತ್ತುಗಳೇನು?